ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಬೆಳಗಾವಿ ಜಿಲ್ಲೆಯ ನೆರೆ ಹಾವಳಿಗೆ ತುತ್ತಾದ ಪ್ರದೇಶಗಳ ಹಾಗೂ ಪರಿಹಾರದ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1140 (1403) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬೆಳಗಾವಿ ಜಿಲ್ಲೆಯ ಅತೀ ಹೆಚ್ಚು ಪ್ರದೇಶಗಳು ನೆರೆ ಹಾವಳಿಗೆ ಒಳಗಾಗಿದ್ದು, ಆ ಸಂತ್ರಸ್ಥರಿಗೆ ಪರಿಹಾರ ದೊರಕಿಲ್ಲವೆಂದು ಮಾಧ್ಯಮಗಳಲ್ಲಿ ವರದಿಯಾಗಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯಲ್ಲಿ ನೆರೆ ಹಾವಳಿಗೆ ತುತ್ತಾದ ಒಟ್ಟು ತಾಲ್ಲೂಕುಗಳ ಸಂಖ್ಯೆ ಎಷ್ಟು ;

(ಇ) ಈ ನೆರೆ ಹಾವಳಿಯಿಂದ ಉಂಟಾದ ಹಾನಿ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈವರೆಗೆ ಸರ್ಕಾರದಿಂದ ಪ್ರತಿ ತಾಲ್ಲೂಕಿಗೆ ಬಿಡುಗಡೆಯಾದ ನೆರೆ ಪರಿಹಾರದ ಮೊತ್ತದ ವಿವರ ನೀಡುವುದು ;

(ಉ) ಹಾನಿಯ ಲೆಕ್ಕಾಚಾರ ಹಾಕಿ ಸರ್ಕಾರಕ್ಕೆ ದಾಖಲೆ ಸಲ್ಲಿಸಿರುವ ಕೆಲವು ತಾಲ್ಲೂಕಿನ ಸಂತ್ರಸ್ಥರಿಗೆ ಅದಕ್ಕೆ ಪೂರಕವಾಗಿ ಒಂದು ಕಂತಿನ ಹಣ ಮಾತ್ರ ದೊರಕಿದ್ದು, ಉಳಿದ ಪರಿಹಾರದ ಮೊತ್ತವು ಬಂದಿಲ್ಲವೆಂದು ಸಂತ್ರಸ್ಥರು ಹೇಳುತ್ತಿದ್ದು, ಇದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?